143	ಉಳ್ಳಾಲ	192971	128682
144	ಸುರತ್ಕಲ್	172411	146720
145	ಮೂಡಬಿದ್ರಿ	71928	44025
	ಒಟ್ಟು	**671360**	**468042**

ಈ) ತಾಲ್ಲೂಕು ಮಟ್ಟದ ಆಶ್ರಯ, ಅಕ್ರಮ ಸಕ್ರಮ, ತ್ರೈಮಾಸಿಕ ಪರಿಶೀಲನಾ ಸಮಿತಿಗಳಲ್ಲಿ ಸಂಬಂಧಪಟ್ಟ ತಾಲ್ಲೂಕಿನ ಅತಿಹೆಚ್ಚು ಕ್ಷೇತ್ರವನ್ನು ಪ್ರತಿನಿಧಿಸುವ ವಿಧಾನಸಭಾ ಸದಸ್ಯರು ಅಧ್ಯಕ್ಷರಾಗಿರುತ್ತಾರೆ.

ಹುಬ್ಬಳ್ಳಿಯ ಉಣಕಲ್ ಕೆರೆಯಲ್ಲಿ ದೋಷಪೂರಿತ ನೀರು.

1520 - ಶ್ರೀ ಜಗದೀಶ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ) : ಮಾನ್ಯ ಪರಿಸರ ಜೀವಿಶಾಸ್ತ್ರ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಅಸಂಪ್ರದಾಯಕ ಇಂಧನ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹುಬ್ಬಳ್ಳಿ ನಗರದ ಉಣಕಲ್ ಕೆರೆಯ ಪರಿಸರ ರಕ್ಷಣೆ ಆಗುತ್ತಿಲ್ಲದಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ?

ಆ) ಬಂದಿದ್ದಲ್ಲಿ ಸದರಿ ಕೆರೆಯ ಪರಿಸರ ರಕ್ಷಣೆಗೆ ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು?

ಶ್ರೀ ಬಸವರಾಜ್ ನೀ. ಶಿವಣ್ಣನವರ್ (ಪರಿಸರ, ಜೀವಿಶಾಸ್ತ್ರ ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಅಸಂಪ್ರದಾಯಕ ಇಂಧನ ರಾಜ್ಯ ಸಚಿವರು) :

ಅ) ಬಂದಿದೆ.

ಆ) ಸದರಿ ಕೆರೆಯ ಜಲಾನಯನ ಪ್ರದೇಶದಲ್ಲಿನ ಬಡಾವಣೆಗಳಿಂದ ಬರುತ್ತಿರುವ ಗೃಹ ಬಳಕೆಯ ಕಲುಷಿತ ನೀರು ಉಣಕಲ್ ಕೆರೆಗೆ ಸೇರದಂತೆ ಸೂಕ್ತ ಕ್ರಮಗಳನ್ನು ತೆಗೆದುಕೊಳ್ಳಲು ಹಾಗೂ ಹೊಸ ಬಡಾವಣೆಗಳಲ್ಲಿ ಗೃಹ ಬಳಕೆಯಿಂದ ಬರುವ ಕಲುಷಿತ ನೀರಿಗೆ ತಮ್ಮದೇ ಆದ ಶುದ್ಧೀಕರಣ ಘಟಕಗಳನ್ನು ಅಳವಡಿಸಿ, ಶುದ್ಧೀಕರಿಸಿದ ನೀರನ್ನು ತಮ್ಮ ಪ್ರದೇಶದಲ್ಲಿಯೇ ವ್ಯವಸಾಯಕ್ಕೆ ಉಪಯೋಗಿಸುವಂತೆ ಸೂಚಿಸಲು ಹುಬ್ಬಳ್ಳಿ ಧಾರವಾಡ ಮಹಾನಗರ ಪಾಲಿಕೆಗೆ ಸೂಚಿಸಲಾಗಿದೆ.

ಹುಬ್ಬಳ್ಳಿ ಗ್ರಾಮೀಣ ಕ್ಷೇತ್ರದ ಹೆಬಸೂರು ಗ್ರಾಮಕ್ಕೆ ಪ್ರಾ.ಆ. ಕೇಂದ್ರ

1521 - ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಗ್ರಾಮಗಳಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಸ್ಥಾಪಿಸಲು ಅವಶ್ಯವಿರುವ ಅಳತೆಗೋಲುಗಳೇನು?*

ಆ) *ಸದರಿ ಅಳತೆಗೊಲುಗಳ ಪ್ರಕಾರ ಹುಬ್ಬಳ್ಳಿ ಗ್ರಾಮೀಣ ಕ್ಷೇತ್ರದ ಹೆಬಸೂರು ಗ್ರಾಮ 10 ಸಾವಿರಕ್ಕೆ ಹೆಚ್ಚು ಜನಸಂಖ್ಯೆ ಹೊಂದಿ, ಉತ್ತಮ ಕಟ್ಟಡ ಹೊಂದಿದ್ದರೂ, ಪ್ರಾಥಮಿಕ ಆರೋಗ್ಯ ಕೇಂದ್ರ ಸ್ಥಾಪಿಸುವಂತೆ ಅಲ್ಲಿಯ ಜನ ಬೇಡಿಕೆ ಇಟ್ಟಿದ್ದರೂ ಸದರಿ ಬೇಡಿಕೆ ಈಡೇರದೆ ಇರಲಿಕ್ಕೆ ಕಾರಣಗಳೇನು?*

ಇ) *ಸದರಿ ಗ್ರಾಮದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ ಸ್ಥಾಪಿಸಲು ಸರ್ಕಾರವು ಕ್ರಮ ಕೈಗೊಳ್ಳುವುದೇ?*

ಡಾ|| ಹೆಚ್.ಸಿ. ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಭಾರತ ಸರ್ಕಾರದ ಮಾರ್ಗಸೂಚಿಯ ಪ್ರಕಾರ ಬಯಲು ಸೀಮೆಗೆ 30,000 ಜನಸಂಖ್ಯೆಗೆ ಒಂದು, ಗುಡ್ಡಗಾಡು ಮತ್ತು ಆಧಿವಾಸಿ ಪ್ರದೇಶಗಳಲ್ಲಿ 20,000 ಜನಸಂಖ್ಯೆಗೆ ಒಂದರಂತೆ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಮಂಜೂರು ಮಾಡಲಾಗುತ್ತಿದೆ.

ಆ) ಮೇಲಿನ ಮಾರ್ಗಸೂಚಿಯ ಪ್ರಾಕಾರ ಅರ್ಹತೆ ಇರುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಎರಡನೇ ಪ್ರಿಯೂನಿವರ್ಸಿಟಿ ವಿದ್ಯಾರ್ಥಿಗಳಿಗೆ ಪ್ರಾಕ್ಟಿಕಲ್ ಪರೀಕ್ಷೆ

1523 - ಶ್ರೀ ರಾಮಲಿಂಗಾ ರೆಡ್ಡಿ (ಜಯನಗರ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಎರಡನೇ ಪ್ರಿಯೂನಿವರ್ಸಿಟಿ ವಿದ್ಯಾರ್ಥಿಗಳಿಗೆ ಪ್ರಾಕ್ಟಿಕಲ್ ಪರೀಕ್ಷೆಗಳನ್ನು ಈಗ ನಡೆಸಲಾಗುತ್ತಿದೆಯೇ?*

ಆ) *ಇಲ್ಲದಿದ್ದಲ್ಲಿ 1998-99ನೇ ಸಾಲಿನಿಂದ ಪ್ರಾಕ್ಟಿಕಲ್ ಪರೀಕ್ಷೆಗಳನ್ನು ನಡೆಸಲು ಸರ್ಕಾರವು ಉದ್ದೇಶಿಸಿದೆಯೇ?*

ಇ) *ಇದರಿಂದ ಸರ್ಕಾರಕ್ಕೆ ಹೆಚ್ಚಿನ ಹಣಕಾಸಿನ ಹೊರೆ ಬೀಳುವುದಿಲ್ಲವೇ?*

ಈ) *ಹಾಗಿದ್ದಲ್ಲಿ ಈ ಪ್ರಸ್ತಾವನೆಯನ್ನು ಜಾರಿಗೆ ತರದಿರಲು ಪರಿಶೀಲಿಸುವರೆ?*

ಶ್ರೀ ಹೆಚ್.ಜಿ. ಗೋವಿಂದೇಗೌಡ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು) :

ಅ) ಇಲ್ಲ .